NR-230 GR-900

(1)

ಡೈರೆಕ್ಟರ್ ಜನರಲ್ ಮತ್ತು ಇನ್ಸ್‌ಪೆಕ್ಟರ್ ಜನರಲ್
ಆಫ್ ಪೊಲೀಸ್‌ರವರ ಕಾರ್ಯಾಲಯ,
ಕರ್ನಾಟಕ ರಾಜ್ಯ, ನೃಪತುಂಗ ರಸ್ತೆ,
ಬೆಂಗಳೂರು - 560 001

**ಕರ್ನಾಟಕ ಸರ್ಕಾರ**

**(ಪೊಲೀಸ್ ಇಲಾಖೆ)**

**ಡೈರೆಕ್ಟರ್ ಜನರಲ್ ಮತ್ತು ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್ ರವರ ಕಛೇರಿ,**
**ಕರ್ನಾಟಕ ರಾಜ್ಯ, ನಂ.02, ನೃಪತುಂಗ ರಸ್ತೆ, ಬೆಂಗಳೂರು – 560001**

ದೂರವಾಣಿ ಸಂಖ್ಯೆ: 080-22942820/2826    ಇ-ಮೇಲ್ ವಿಳಾಸ: ksp[illegible]

ಸಂಖ್ಯೆ: ಹೆಚ್‌ಆರ್‌ಎಂ-2(1)195/2020-21    ದಿನಾಂಕ: [illegible].03.2026

ಇವರಿಗೆ,

1) ಪೊಲೀಸ್ ಮಹಾನಿರ್ದೇಶಕರು, ಸಿಐಡಿ/ ಆಂತರಿಕ ಭದ್ರತಾ ವಿಭಾಗ, ಬೆಂಗಳೂರು.
2) ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕರು, ಕೆಎಸ್‌ಆರ್‌ಪಿ, ಬೆಂಗಳೂರು.
3) ಎಲ್ಲಾ ನಗರ ಪೊಲೀಸ್ ಆಯುಕ್ತರುಗಳಿಗೆ.
4) ಎಲ್ಲಾ ಜಿಲ್ಲೆ ಪೊಲೀಸ್ ಅಧೀಕ್ಷಕರುಗಳಿಗೆ. (ರೈಲ್ವೇಸ್ ಮತ್ತು ಕೆಜಿಎಫ್ ಸೇರಿದಂತೆ)

ಮಾನ್ಯರೇ

ವಿಷಯ: ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿಮಾಡುವ ಕುರಿತು.

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 01 ಸೆಹಿಮ 2026 ದಿನಾಂಕ:27.02.2026

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯ ಈ ಕೆಳಕಂಡ ಹುದ್ದೆಗಳನ್ನು ನೇರ ನೇಮಕಾತಿಯ ಮೂಲಕ ಭರ್ತಿಮಾಡಿಕೊಳ್ಳಲು ಸರ್ಕಾರವು ಈಗಾಗಲೇ ಅನುಮತಿ ನೀಡಿದ್ದು, ಸದರಿ ಹುದ್ದೆಗಳನ್ನು ನಗರ/ಜಿಲ್ಲಾ/ಘಟಕಗಳಿಗೆ ಮರು ಹಂಚಿಕೆಮಾಡಿ ತಮ್ಮ ಘಟಕಗಳಿಗೆ ಹಂಚಿಕೆಯಾಗಿರುವ ಹುದ್ದೆಗಳಿಗೆ ಸಂಬಂಧಿಸಿದಂತೆ ವರ್ಗೀಕರಣದ ವಿವರವನ್ನು ನೇಮಕಾತಿ ವಿಭಾಗಕ್ಕೆ ಒದಗಿಸಲು ಈ ಹಿಂದೆ ನಿರ್ದೇಶಿಸಲಾಗಿತ್ತು. ಅದರಂತೆ ತಮ್ಮ ಘಟಕಗಳಿಂದ ಚಾಲ್ತಿ ಮೀಸಲಾತಿ/ರೋಸ್ಟರ್ ನಿಯಮಗಳನ್ವಯ ವರ್ಗೀಕರಣ ಮಾಡಿ ವರ್ಗಿಕರಣದ ವಿವರವನ್ನು ನೇಮಕಾತಿ ವಿಭಾಗಕ್ಕೆ ಕಳುಹಿಸಲಾಗಿರುತ್ತದೆ.

| **ಕ್ರ. ಸಂ** | **ಹುದ್ದೆ** | **ಕಲ್ಯಾಣ ಕರ್ನಾಟಕ** | **ಕಲ್ಯಾಣ ಕರ್ನಾಟಕೇತರ** | **ಒಟ್ಟು** |
|---|---|---|---|---|
| 01 | ಡಿಟೆಕ್ಟಿವ್ ಸಬ್ ಇನ್ಸ್‌ಪೆಕ್ಟರ್ (ಡಿಎಸ್‌ಐ) | 05 | 15 | 20 |
| 02 | ಸಶಸ್ತ್ರ ಪೊಲೀಸ್ ಕಾನ್ಸ್‌ಟೇಬಲ್ (ಎಪಿಸಿ) | 275 | 1375 | 1650 |
| 03 | ನಾಗರಿಕ ಪೊಲೀಸ್ ಕಾನ್ಸ್‌ಟೇಬಲ್ (ಸಿವಿಲ್) | 610 | 3500 | 4110 |
| 04 | ಸ್ಪೆ. ರಿಸರ್ವ್ ಪೊಲೀಸ್ ಕಾನ್ಸ್‌ಟೇಬಲ್(ಕೆಎಸ್‌ಆರ್‌ಪಿ) | 532 | 1500 | 2032 |
| 05 | ಪೊಲೀಸ್ ಕಾನ್ಸ್‌ಟೇಬಲ್(ಕೆಎಸ್‌ಐಎಸ್‌ಎಫ್) | 364 | - | 364 |

ಆದರೆ, ಸರ್ಕಾರವು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ಮೀಸಲಾತಿ ಪ್ರಮಾಣವನ್ನು ಕ್ರಮವಾಗಿ ಶೇ.15 ರಿಂದ ಶೇ. 17 ಕ್ಕೆ ಹಾಗೂ ಶೇ. 3 ರಿಂದ ಶೇ. 7 ಕ್ಕೆ ಹೆಚ್ಚಿಸಲಾದ ಕರ್ನಾಟಕ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಪಂಗಡಗಳ (ಶೈಕ್ಷಣಿಕ ಸಂಸ್ಥೆಗಳಲ್ಲಿನ ಸ್ಥಾನಗಳಲ್ಲಿ ಮತ್ತು ರಾಜ್ಯಾಧೀನ ಸೇವೆಗಳಲ್ಲಿನ ನೇಮಕಾತಿ ಅಥವಾ ಹುದ್ದೆಗಳಲ್ಲಿ ಮೀಸಲಾತಿ) ಅಧಿನಿಯಮ-2022 ಅನ್ನು ಘನ ಉಚ್ಚನ್ಯಾಯಾಲದಲ್ಲಿ ರಿಟ್ ಅರ್ಜಿ ಸಂಖ್ಯೆ: 200448/2025, 17968/2025 ಮತ್ತು 3145/2025ರಲ್ಲಿ ಪ್ರಶ್ನಿಸಲಾಗಿದ್ದು, ಘನ ಉಚ್ಚನ್ಯಾಯಾಲಯವು ಸದರಿ ಅರ್ಜಿಗಳ ಸಂಬಂಧ ದಿನಾಂಕ:27.11.2025ರಂದು ನೀಡಿರುವ ಮಧ್ಯಂತರ ಆದೇಶವನ್ನು ಪರಿಗಣಿಸಿ ಸರ್ಕಾರವು ರಿಕ್ತವಿರುವ ಸಿವಿಲ್ ಸೇವಾ ಹುದ್ದೆಗಳಿಗೆ ನೇಮಕಾತಿ ಪ್ರಕ್ರಿಯೆಯನ್ನು ಕೈಗೊಳ್ಳಲು/ ಮುಂದುವರೆಸುವ ಸಂಬಂಧ ಉಲ್ಲೇಖಿತ ಸರ್ಕಾರದ ಆದೇಶದಲ್ಲಿ ನಿರ್ದೇಶನಗಳನ್ನು ನೀಡಿರುತ್ತದೆ. (ಪ್ರತಿ ಲಗತ್ತಿಸಿದೆ)

ಆದ್ದರಿಂದ, ಈಗಾಗಲೇ ತಮ್ಮ ಕಛೇರಿ/ ಘಟಕಗಳಿಂದ ಮೇಲ್ಕಂಡ ಹುದ್ದೆಗಳಿಗೆ ಸಂಬಂಧಿಸಿಂದತೆ ಒದಗಿಸಲಾಗಿರುವ ವರ್ಗೀಕರಣದ ವಿವರವನ್ನು ಉಲ್ಲೇಖಿತ ಸರ್ಕಾರದ ಆದೇಶದಲ್ಲಿ ನೀಡಿರುವ ನಿರ್ದೇಶನಗಳ ಅನುಸಾರ ಮರು ಪರಿಶೀಲಿಸಿ ತಮ್ಮ ಘಟಕಗಳಿಗೆ ಹಂಚಿಕೆಮಾಡಿರುವ ಒಟ್ಟು ಹುದ್ದೆಗಳಲ್ಲಿ ಶೇಕಡಾ 6 ರಷ್ಟು ಹುದ್ದೆಗಳನ್ನು ಕಾಯ್ದಿರಿಸಿಕೊಂಡು ಉಳಿದ ಹುದ್ದೆಗಳಿಗೆ ಸಂಬಂಧಿಸಿದಂತೆ ನೇರ ಮೀಸಲಾತಿಯನ್ನು ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 1 ಸೇಹಿಮ 2022, ದಿನಾಂಕ: 28-12-2022ರ ಆದೇಶದ ಪೂರ್ವದಲ್ಲಿ ಜಾರಿಯಲ್ಲಿದ್ದ ಮೀಸಲಾತಿ ಆದೇಶ ಮತ್ತು ರೋಸ್ಟರ್ ಬಿಂದುಗಳಂತೆ (ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 8 ಸೇಹಿಮ 1995, ದಿನಾಂಕ 20.06.1995ರನ್ವಯ ಮೀಸಲಾತಿ ಪ್ರಮಾಣವನ್ನು ಶೇ.50ಕ್ಕೆ) ಹಾಗೂ ಸಮತಳ ಮೀಸಲಾತಿಯನ್ನು ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 02 ಸೇಹಿಮ 2023, ದಿನಾಂಕ: 8.3.2023ರಲ್ಲಿ ನಿಗಧಿಪಡಿಸಲಾಗಿರುವ ರೋಸ್ಟರ್ ಬಿಂದುಗಳ ಅನುಸಾರ ವರ್ಗೀಕರಣ ವಿವರವನ್ನು ತಯಾರಿಸಿ ದಿನಾಂಕ:05.03.2026ರೊಳಗೆ ನೇಮಕಾತಿ ವಿಭಾಗಕ್ಕೆ ಕಳುಹಿಸಲು ನಿಯಮಾನುಸಾರ ಕ್ರಮವಹಿಸುವಂತೆ ಕೋರಲಾಗಿದೆ.

ತಮ್ಮ ವಿಶ್ವಾಸಿ,

(ಡಾ|| ಎಂ. ಎ. ಸಲೀಂ, ಐಪಿಎಸ್)
ಡೈರೆಕ್ಟರ್ ಜನರಲ್ ಮತ್ತು ಇನ್ಸ್‌ಪೆಕ್ಟರ್
ಜನರಲ್ ಆಫ್ ಪೊಲೀಸ್

**ಪ್ರತಿ:**

1. ಪೊಲೀಸ್ ಮಹಾನಿರ್ದೇಶಕರು, ನೇಮಕಾತಿ, ಬೆಂಗಳೂರು.
2. ಎಲ್ಲಾ ಕೆಎಸ್‌ಆರ್‌ಪಿ ಮತ್ತು ಕೆಎಸ್‌ಐಎಸ್‌ಎಫ್ ಕಮಾಂಡೆಂಟ್‌ಗಳಿಗೆ ಸೂಕ್ತ ಕ್ರಮಕ್ಕಾಗಿ.

DGP CONTROL ROOM, BENGALURU
O/o. the DG & IGP, N.T.Road, B'luru-1
Out Messages Received for Transmission
NR No. 230 THI. 1040hrs
Date. 04/03/26 Sign.

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ**: 2022ರ ಅಧಿನಿಯಮದನ್ವಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ಹೆಚ್ಚಿಸಲಾದ ಮೀಸಲಾತಿ ಪ್ರಮಾಣವನ್ನು ಪ್ರಶ್ನಿಸಿ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಾಗಿದ್ದ ಪ್ರಕರಣಗಳಲ್ಲಿ ಮಾನ್ಯ ನ್ಯಾಯಾಲಯವು ನೀಡಿರುವ ಮಧ್ಯಂತರ ಆದೇಶದ ಹಿನ್ನೆಲೆಯಲ್ಲಿ ನೇಮಕಾತಿ ಪ್ರಕ್ರಿಯೆಯನ್ನು ಮುಂದುವರೆಸಲು ಕೈಗೊಳ್ಳಬೇಕಾದ ಕ್ರಮಗಳ ಕುರಿತು.

**ಓದಲಾಗಿದೆ**:

1. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 8 ಸೇಹಿಮ 1995, ದಿನಾಂಕ 20.06.1995
2. ಕರ್ನಾಟಕ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಪಂಗಡಗಳು (ಶೈಕ್ಷಣಿಕ ಸಂಸ್ಥೆಗಳಲ್ಲಿನ ಸ್ಥಾನಗಳಲ್ಲಿ ಮತ್ತು ರಾಜ್ಯಾಧೀನ ಸೇವೆಗಳಲ್ಲಿನ ನೇಮಕಾತಿ ಅಥವಾ ಹುದ್ದೆಗಳಲ್ಲಿ ಮೀಸಲಾತಿ) ಅಧಿನಿಯಮ, 2022
3. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 01 ಸೇಹಿಮ 2022, ದಿನಾಂಕ: 28.12.2022
4. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 02 ಸೇಹಿಮ 2023, ದಿನಾಂಕ: 8.3.2023
5. ಸರ್ಕಾರದ ಆದೇಶ ಸಂಖ್ಯೆ: ಸಕಇ 8 ಎಸ್‌ಎಲ್‌ಪಿ 2024 (ಭಾ-1), ದಿನಾಂಕ: 25-08-2025
6. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 2 ಸೇಹಿಮ 2025, ದಿನಾಂಕ: 03-09-2025
7. ಮಾನ್ಯ ನ್ಯಾಯಾಲಯದಲ್ಲಿ ದಾಖಲಾಗಿರುವ ರಿಟ್ ಅರ್ಜಿ ಸಂಖ್ಯೆ: 200448 /2025, 17968/2025 ಮತ್ತು 3145/2023ರಲ್ಲಿ ದಿನಾಂಕ 27.11.2025ರಂದು ನೀಡಿರುವ ಮಧ್ಯಂತರ ಆದೇಶ.

**ಪ್ರಸ್ತಾವನೆ**:

ಮೇಲೆ (1)ರಲ್ಲಿ ಓದಲಾದ ದಿನಾಂಕ 20.06.1995ರ ಸರ್ಕಾರದ ಆದೇಶದಲ್ಲಿ, ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ ಮಾಡುವ ನೇರ ನೇಮಕಾತಿಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ಕ್ರಮವಾಗಿ ನಿಗಧಿಪಡಿಸಲಾಗಿದ್ದ ಶೇ15 ಮತ್ತು ಶೇ 3 ಮೀಸಲಾತಿ ಪ್ರಮಾಣಕ್ಕೆ ಅನುಗುಣವಾಗಿ ಭರ್ತಿ ಮಾಡಬೇಕಾದ ರಿಕ್ತ ಸ್ಥಾನಗಳಿಗೆ 100 ಬಿಂದುಗಳ ರೋಸ್ಟರನ್ನು ನಿಗಧಿಪಡಿಸಲಾಗಿರುತ್ತದೆ.

24/02/2026

(4)



2. ಮೇಲೆ (2) ರಲ್ಲಿ ಓದಲಾದ ಕರ್ನಾಟಕ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಪಂಗಡಗಳು (ಶೈಕ್ಷಣಿಕ ಸಂಸ್ಥೆಗಳಲ್ಲಿನ ಸ್ಥಾನಗಳಲ್ಲಿ ಮತ್ತು ರಾಜ್ಯಾಧೀನ ಸೇವೆಗಳಲ್ಲಿನ ನೇಮಕಾತಿ ಅಥವಾ ಹುದ್ದೆಗಳಲ್ಲಿ ಮೀಸಲಾತಿ) ಅಧಿನಿಯಮ, 2022ರಲ್ಲಿ, ಶೈಕ್ಷಣಿಕ ಸಂಸ್ಥೆಗಳಲ್ಲಿನ ಸ್ಥಾನಗಳಲ್ಲಿ ಮತ್ತು ರಾಜ್ಯಾಧೀನ ಸೇವೆಗಳಲ್ಲಿನ ನೇಮಕಾತಿ ಅಥವಾ ಹುದ್ದೆಗಳಲ್ಲಿ ರಾಜ್ಯದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳಿಗೆ ಸೇರಿದ ವ್ಯಕ್ತಿಗಳಿಗೆ ಶೇ. 17 ಮತ್ತು ಶೇ.7 ರಂತೆ ಮೀಸಲಾತಿ ಪ್ರಮಾಣವನ್ನು ಅನುಕ್ರಮವಾಗಿ ಹೆಚ್ಚಿಸಲಾಗಿರುತ್ತದೆ.

3. ಮೇಲೆ (3)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ 2022ರ ಅಧಿನಿಯಮದನ್ವಯ ಹೆಚ್ಚಿನ ಮೀಸಲಾತಿ ಪ್ರಮಾಣಕ್ಕೆ ಅನುಗುಣವಾಗಿ ನೇರ ನೇಮಕಾತಿ ಮುಖಾಂತರ ಭರ್ತಿ ಮಾಡುವ ರಿಕ್ತ ಸ್ಥಾನಗಳಿಗೆ ಸಂಬಂಧಿಸಿದಂತೆ 100 ಬಿಂದುಗಳ ಪರಿಷ್ಕೃತ ರೋಸ್ಟರನ್ನು ನಿಗದಿಪಡಿಸಿ ಆದೇಶಿಸಲಾಗಿರುತ್ತದೆ.

4. ಮೇಲೆ (4) ರಲ್ಲಿ ಓದಲಾದ ದಿನಾಂಕ 08.03.2023ರ ಸರ್ಕಾರದ ಆದೇಶದಲ್ಲಿ ಪ್ರತಿಯೊಂದು ನೇರ ಮೀಸಲಾತಿ ಪ್ರವರ್ಗದಡಿ (under each category of vertical reservation) ಮಾಜಿ ಸೈನಿಕ, ಅಂಗವಿಕಲ, ಮಹಿಳೆ, ಯೋಜನೆಗಳಿಂದ ನಿರ್ವಸಿತರಾದವರು, ಗ್ರಾಮೀಣ ಅಭ್ಯರ್ಥಿ, ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿ ಮತ್ತು ತೃತೀಯ ಲಿಂಗಿಗಳಿಗೆ ಕಲ್ಪಿಸಲಾದ ಸಮತಳ ಮೀಸಲಾತಿಯನ್ನು ಜಾರಿಗೊಳಿಸಲು 100 ಬಿಂದುಗಳ ರೋಸ್ಟರನ್ನು ನಿಗದಿಪಡಿಸಿ ಆದೇಶಿಸಲಾಗಿರುತ್ತದೆ.

5. ಮೇಲೆ (5) ರಲ್ಲಿ ಓದಲಾದ ದಿನಾಂಕ 25.08.2025ರ ಸರ್ಕಾರದ ಆದೇಶದಲ್ಲಿ ಪರಿಶಿಷ್ಟ ಜಾತಿಗಳಲ್ಲಿರುವ 101 ಜಾತಿಗಳನ್ನು ಪ್ರವರ್ಗ-ಎ, ಪ್ರವರ್ಗ-ಬಿ ಮತ್ತು ಪ್ರವರ್ಗ-ಸಿ ಗಳೆಂದು 3 ಪ್ರವರ್ಗಗಳಾಗಿ ವರ್ಗೀಕರಿಸಿ, ಶಿಕ್ಷಣ ಮತ್ತು ಉದ್ಯೋಗದಲ್ಲಿ ಪರಿಶಿಷ್ಟ ಜಾತಿಗಳಿಗೆ ಪ್ರಸ್ತುತ ಜಾರಿಯಲ್ಲಿರುವ ಶೇಕಡ 17 ಮೀಸಲಾತಿಯನ್ನು, ಪ್ರವರ್ಗ-ಎ ರಲ್ಲಿನ ಸಮುದಾಯಗಳಿಗೆ ಶೇಕಡ 6, ಪ್ರವರ್ಗ-ಬಿ ರಲ್ಲಿನ ಸಮುದಾಯಗಳಿಗೆ ಶೇಕಡ 6 ಮತ್ತು ಪ್ರವರ್ಗ-ಸಿ ರಲ್ಲಿನ ಸಮುದಾಯಗಳಿಗೆ ಶೇಕಡ 5 ರಷ್ಟು ಮೀಸಲಾತಿಯನ್ನು ನಿಗದಿಪಡಿಸಿ ಆದೇಶಿಸಲಾಗಿರುತ್ತದೆ.

27/02/2026

6. ಮೇಲೆ (6) ರಲ್ಲಿ ಓದಲಾದ ದಿನಾಂಕ 03.09.2025ರ ಸರ್ಕಾರದ ಆದೇಶದಲ್ಲಿ, ದಿನಾಂಕ 28.12.2022ರ ಆದೇಶದಲ್ಲಿ ನಿಗದಿಪಡಿಸಲಾಗಿದ್ದ 100 ಬಿಂದುಗಳ ಮೀಸಲಾತಿ ರೋಸ್ಟರಿನಲ್ಲಿ ಪರಿಶಿಷ್ಟ ಜಾತಿಗಳಿಗೆ ಗುರುತಿಸಲಾಗಿರುವ 17 ಬಿಂದುಗಳನ್ನು ಮಾತ್ರ ಸದರಿ ಆದೇಶದದಲ್ಲಿರುವ ಅನುಬಂಧದಂತೆ ಪುನರ್ ವರ್ಗೀಕರಿಸಿ ಆದೇಶಿಸಲಾಗಿರುತ್ತದೆ

7. ಮೇಲೆ (7)ರಲ್ಲಿ ಓದಲಾದ ಪ್ರಕರಣಗಳಲ್ಲಿ ಕರ್ನಾಟಕ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಪಂಗಡಗಳು (ಶೈಕ್ಷಣಿಕ ಸಂಸ್ಥೆಗಳಲ್ಲಿನ ಸ್ಥಾನಗಳಲ್ಲಿ ಮತ್ತು ರಾಜ್ಯಾಧೀನ ಸೇವೆಗಳಲ್ಲಿನ ನೇಮಕಾತಿ ಅಥವಾ ಹುದ್ದೆಗಳಲ್ಲಿ ಮೀಸಲಾತಿ) ಅಧಿನಿಯಮ, 2022ರನ್ವಯ ಪರಿಶಿಷ್ಟಜಾತಿ ಮತ್ತು ಪರಿಶಿಷ್ಟ ಪಂಗಡಗಳಿಗೆ ಮೀಸಲಾತಿ ಪ್ರಮಾಣವನ್ನು ಕ್ರಮವಾಗಿ ಶೇ.15 ರಿಂದ ಶೇ.17ಕ್ಕೆ ಹಾಗೂ ಶೇ.3 ರಿಂದ ಶೇ.7ಕ್ಕೆ ಹೆಚ್ಚಿಸಲಾಗಿರುವುದನ್ನು ಪ್ರಶ್ನಿಸಲಾಗಿದ್ದು, ಸದರಿ ಪ್ರಕರಣಗಳಲ್ಲಿ ಮಾನ್ಯ ಉಚ್ಚ ನ್ಯಾಯಾಲಯವು **ದಿನಾಂಕ: 27.11.2025ರಂದು ಕೆಳಗಿನಂತೆ** ಮಧ್ಯಂತರ ಆದೇಶ ನೀಡಿರುತ್ತದೆ.

> 6. Considering that recruitment process has already begun pursuant to certain notifications specifying the enhanced reservation under the Karnataka Scheduled Castes and Scheduled Tribes (Reservation of Seats in Education Institutions and Appointments of Posts and Services under the State) Act, 2022 (hereafter Act), **we consider it apposite to modify our order dated 19.11.2025 to direct that no further notifications for recruitment or appointment on the basis of increased reservation would be issued till the disposal of the present petitions. The recruitment pursuant to the process that is already begun, may be continued. However, any appointment made shall be subject to the final outcome of the present petitions.**

8. ಮಾನ್ಯ ಉಚ್ಚ ನ್ಯಾಯಾಲಯವು ಮೇಲಿನಂತೆ ನೀಡಿರುವ ಮಧ್ಯಂತರ ಆದೇಶದಿಂದಾಗಿ ಹಲವಾರು ಇಲಾಖೆಗಳಲ್ಲಿನ ಖಾಲಿ ಹುದ್ದೆಗಳ ನೇಮಕಾತಿ ಪ್ರಕ್ರಿಯೆ

ಸ್ಥಗಿತಗೊಂಡಿದ್ದು, ನಿರುದ್ಯೋಗಿ ಅಭ್ಯರ್ಥಿಗಳ ಹಿತದೃಷ್ಟಿಯಿಂದ ಹಾಗೂ ಆಡಳಿತಾತ್ಮಕ ವ್ಯವಸ್ಥೆಯ ಮೇಲೆ ಪರಿಣಾಮ ಬೀರುತ್ತಿರುವುದರಿಂದ ನೇಮಕಾತಿ ಪ್ರಕ್ರಿಯೆಯನ್ನು ತುರ್ತಾಗಿ ಮುಂದುವರೆಸಬೇಕಾಗಿರುವುದರಿಂದ ನೇಮಕಾತಿ ಅಧಿಸೂಚನೆಗಳನ್ನು ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 1 ಸೇಹಿಮ 2022, ದಿನಾಂಕ: 28-12-2022ರ ಆದೇಶದ ಪೂರ್ವದಲ್ಲಿ ಜಾರಿಯಲ್ಲಿದ್ದ ಮೀಸಲಾತಿ ಆದೇಶ ಮತ್ತು ರೋಸ್ಟರ್ ಬಿಂದುಗಳಂತೆ (ಮೀಸಲಾತಿ ಪ್ರಮಾಣ ಶೇ.50ಕ್ಕೆ) ಹೊರಡಿಸುವುದು ಸೂಕ್ತವೆಂದು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 01 ಸೇಹಿಮ 2026,</u>**

**ಬೆಂಗಳೂರು, ದಿನಾಂಕ: 27.02.2026**

ಪ್ರಸ್ತಾವನೆಯಲ್ಲಿ ವಿವರಿಸಿರುವ ಸನ್ನಿವೇಶದಲ್ಲಿ, ಸರ್ಕಾರ ಈ ಕೆಳಕಂಡಂತೆ ಆದೇಶಿಸಿದೆ.

1. ಕರ್ನಾಟಕ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಪಂಗಡಗಳು (ಶೈಕ್ಷಣಿಕ ಸಂಸ್ಥೆಗಳಲ್ಲಿನ ಸ್ಥಾನಗಳಲ್ಲಿ ಮತ್ತು ರಾಜ್ಯಾಧೀನ ಸೇವೆಗಳಲ್ಲಿನ ನೇಮಕಾತಿ ಅಥವಾ ಹುದ್ದೆಗಳಲ್ಲಿ ಮೀಸಲಾತಿ) ಅಧಿನಿಯಮ, 2022ನ್ನು ಪ್ರಶ್ನಿಸಿ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಾಗಿರುವ ಪ್ರಕರಣಗಳಲ್ಲಿ ಮಾನ್ಯ ಉಚ್ಚ ನ್ಯಾಯಾಲಯವು ನೀಡುವ ಅಂತಿಮ ತೀರ್ಪಿಗೆ ಒಳಪಟ್ಟು ಹಾಗೂ ಸರ್ಕಾರದ ಮುಂದಿನ ಆದೇಶದವರೆಗೆ, ದಿನಾಂಕ 27.11.2025ರ ನಂತರದಲ್ಲಿ ರಾಜ್ಯ ಸಿವಿಲ್ ಸೇವಾ ಹುದ್ದೆಗಳಿಗೆ ಮಾಡುವ ನೇರ ನೇಮಕಾತಿಗಳಲ್ಲಿ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 1 ಸೇಹಿಮ 2022, ದಿನಾಂಕ: 28-12-2022ರ ಆದೇಶದ ಪೂರ್ವದಲ್ಲಿ ಜಾರಿಯಲ್ಲಿದ್ದ ಮೀಸಲಾತಿ ಆದೇಶ ಮತ್ತು ರೋಸ್ಟರ್ ಬಿಂದುಗಳಂತೆ (ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 8 ಸೇಹಿಮ 1995, ದಿನಾಂಕ 20.06.1995ರನ್ವಯ ಮೀಸಲಾತಿ ಪ್ರಮಾಣವನ್ನು ಶೇ.50ಕ್ಕೆ) ನೇಮಕಾತಿ ಅಧಿಸೂಚನೆಗಳನ್ನು ಹೊರಡಿಸುವಂತೆ ಎಲ್ಲಾ ನೇಮಕಾತಿ/ಆಯ್ಕೆ ಪ್ರಾಧಿಕಾರಗಳಿಗೆ ಸೂಚಿಸಲಾಗಿದೆ.

2. ಈ ರೀತಿಯ ಆಯ್ಕೆಯನ್ನು ಹಿಂದಿನ ನೇಮಕಾತಿಯಲ್ಲಿ ಅಂದರೆ ದಿನಾಂಕ **28.12.2022ರ ಆದೇಶದಲ್ಲಿ ಗೊತ್ತುಪಡಿಸಿರುವ ರೋಸ್ಟರಿನ ಯಾವ** ಬಿಂದುವಿನಲ್ಲಿ

27/02/2026

ನಿಲ್ಲಿಸಲಾಗಿತ್ತೋ ಆ ಬಿಂದುವಿನ ಮುಂದಿನ ರೋಸ್ಟರ್ ಬಿಂದುವಿಗೆ ಸರಿಸಮವಾದ ಬಿಂದುವನ್ನು ದಿನಾಂಕ 20.06.1995ರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 8 ಸೇಹಿಮ 1995ರಲ್ಲಿ ಗುರುತಿಸಿ ಅಲ್ಲಿಂದ ಪ್ರಾರಂಭಿಸಿ ಆಯ್ಕೆ ಮಾಡತಕ್ಕದ್ದು (ಉದಾಹರಣೆಗೆ ಹಿಂದಿನ ನೇಮಕಾತಿಯಲ್ಲಿ ದಿನಾಂಕ 28.12.2022ರ ಆದೇಶದಲ್ಲಿ ಗೊತ್ತುಪಡಿಸಿರುವ ರೋಸ್ಟರಿನ ಅನುಸಾರ 10 ನೇ ಬಿಂದುವಿನವರೆಗೆ ಪೂರ್ಣಗೊಳಿಸಲಾಗಿದ್ದಲ್ಲಿ, ಈಗ **ಮಾಡಬೇಕಾಗಿರುವ ಅಯ್ಕೆಯನ್ನು ದಿನಾಂಕ 20.06.1995ರ** ಆದೇಶದಲ್ಲಿನ **ಅನುಬಂಧ-1ರ ರೋಸ್ಟರಿನ 11 ನೇ ಬಿಂದುವಿನಿಂದ** ಪ್ರಾರಂಭಿಸಿ **ಪೂರ್ಣಗೊಳಿಸತಕ್ಕದ್ದು**).

3. ಮಾನ್ಯ ಉಚ್ಚ ನ್ಯಾಯಾಲಯದ ದಿನಾಂಕ 27.11.2025ರ ಮಧ್ಯಂತರ ಆದೇಶಕ್ಕಿಂತ ಹಿಂದೆ ನೇಮಕಾತಿಗಾಗಿ ಅಧಿಸೂಚನೆಯನ್ನು ಹೊರಡಿಸಿರುವ ಪ್ರಕರಣಗಳನ್ನು ಯಥಾಪ್ರಕಾರ ಮುಂದುವರೆಸಿ, ಅಂತಿಮಗೊಳಿಸುವುದು ಹಾಗೂ ನೇಮಕಾತಿ ಆದೇಶದಲ್ಲಿ ಸ್ಪಷ್ಟವಾಗಿ ಈ ನೇಮಕಾತಿಯು ಮಾನ್ಯ ಉಚ್ಚ ನ್ಯಾಯಾಲಯದ ಅಂತಿಮ ಆದೇಶಕ್ಕೊಳಪಟ್ಟಿರುತ್ತದೆಂದು ಷರಾ ದಾಖಲಿಸತಕ್ಕದ್ದು.

4. ಸಮತಳ ಮೀಸಲಾತಿಗೆ ಸಂಬಂಧಿಸಿದಂತೆ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 02 ಸೇಹಿಮ 2023, ದಿನಾಂಕ: 8.3.2023ರಲ್ಲಿ ನಿಗದಿಪಡಿಸಲಾಗಿರುವ ರೋಸ್ಟರ್ ಬಿಂದುಗಳನ್ನೇ ಮುಂದುವರೆಸುವುದು. ಹಿಂದಿನ ನೇಮಕಾತಿಯಲ್ಲಿ ದಿನಾಂಕ 08.03.2023 ಆದೇಶದಲ್ಲಿ ಗೊತ್ತುಪಡಿಸಿರುವ ರೋಸ್ಟರಿನ ಯಾವ ಬಿಂದುವಿನಲ್ಲಿ ನಿಲ್ಲಿಸಲಾಗಿತ್ತೋ ಆ ಬಿಂದುವಿನ ಮುಂದಿನ ರೋಸ್ಟರ್ ಬಿಂದುವಿನಿಂದ ಪ್ರಾರಂಭಿಸಿ ಆಯ್ಕೆ ಮಾಡತಕ್ಕದ್ದು.

5. ಮಾನ್ಯ ಉಚ್ಚ ನ್ಯಾಯಾಲಯದ ಅಂತಿಮ ಆದೇಶಕ್ಕೆ ಒಳಪಟ್ಟು ಆಯಾ ಇಲಾಖೆಗಳು / ನೇಮಕಾತಿ ಪ್ರಾಧಿಕಾರಗಳು ಮುಂದಿನ ನೇಮಕಾತಿ ಮಾಡಿಕೊಳ್ಳುವ ಹುದ್ದೆಗಳಲ್ಲಿ ಶೇ 6 ರಷ್ಟು (ಪರಿಶಿಷ್ಟ ಜಾತಿಗೆ ಶೇ.2 ಮತ್ತು ಪರಿಶಿಷ್ಟ ಪಂಗಡಕ್ಕೆ ಶೇ.4) ಹುದ್ದೆಗಳನ್ನು ಕಾಯ್ದಿರಿಸತಕ್ಕದ್ದು.

27/01/2026

6. ಮುಂದುವರೆದು, ಖಾಲಿಯಿರುವ ನೇರ ನೇಮಕಾತಿ ಹುದ್ದೆಗಳಲ್ಲಿ ಸುಮಾರು 56432 ಹುದ್ದೆಗಳನ್ನು ತುಂಬುವ ಪ್ರಕ್ರಿಯೆಯನ್ನು ಮುಂದಿನ 30 ದಿನಗಳಲ್ಲಿ ಪ್ರಾರಂಭಿಸುವಂತೆ ಎಲ್ಲಾ ಇಲಾಖೆಗಳಿಗೆ / ನೇಮಕಾತಿ ಪ್ರಾಧಿಕಾರಗಳಿಗೆ ತಿಳಿಸಿದೆ

ಮೇಲಿನ ಸೂಚನೆಗಳು ಸರ್ಕಾರದ ಮುಂದಿನ ಆದೇಶದವರೆಗೆ ಜಾರಿಯಲ್ಲಿರುತ್ತವೆ

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ,

27/02/2026
(ಆಶಾ ಕುಮಾರಿ ಎ. ಜೆ.)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ,
(ಸೇವಾ ನಿಯಮಗಳು).

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು, ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ ಇದರ 50 ಪ್ರತಿಗಳನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವಾ ನಿಯಮಗಳು-ಎ), ಕೊಠಡಿ ಸಂಖ್ಯೆ-31, ವಿಧಾನಸೌಧ, ನೆಲಮಹಡಿ ಇಲ್ಲಿಗೆ ಕಳುಹಿಸುವಂತೆ ಕೋರಲಾಗಿದೆ.

**ಪ್ರತಿ:**

1. ಪ್ರಧಾನ ಮಹಾಲೇಖಪಾಲರು, (ಜಿ&ಎಸ್ಎಸ್ಎ), (ಇ&ಆರ್ಎಸ್ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ ಪಾರ್ಕ್ ಹೌಸ್ ರಸ್ತೆ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು.
4. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಯವರು
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು
6. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಯವರು/ ಪ್ರಧಾನ ಕಾರ್ಯರ್ಶಿಗಳು/ಕಾರ್ಯದರ್ಶಿಗಳು

7. ಮಾನ್ಯ ರಾಜ್ಯಪಾಲರ ವಿಶೇಷ ಕಾರ್ಯದರ್ಶಿಯವರು.
8. *ನಿವಾಸಿ ಆಯುಕ್ತರು, ಕರ್ನಾಟಕ ಭವನ, ಕೌಟಿಲ್ಯ ಮಾರ್ಗ, ನವದೆಹಲಿ.
9. *ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ಪರಿಷತ್ತು, ಬೆಂಗಳೂರು.
10. *ಮಹಾನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
11. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
12. *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
13. *ನಿಬಂಧಕರು, ಕರ್ನಾಟಕ ರಾಜ್ಯ ಆಡಳಿತ ನ್ಯಾಯ ಮಂಡಳಿ, 6 ಮತ್ತು 7ನೇ ಮಹಡಿ, ಕಂದಾಯ ಭವನ, ಕೆ.ಜಿ. ರಸ್ತೆ, ಬೆಂಗಳೂರು-560009
14. *ನಿಬಂಧಕರು, ಕರ್ನಾಟಕ ಮೇಲ್ಮನವಿ ನ್ಯಾಯಾಧೀಕರಣ, ಬಹುಮಹಡಿ ಕಟ್ಟಡ, ಬೆಂಗಳೂರು.
15. ಎಲ್ಲಾ ಇಲಾಖಾ ಮುಖ್ಯಸ್ಥರು/ಎಲ್ಲಾ ಪ್ರಾದೇಶಿಕ ಆಯುಕ್ತರು.
16. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು/ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್/ಎಲ್ಲಾ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು.
17. ಸರ್ಕಾರದ ಅಪರ ಕಾರ್ಯದರ್ಶಿ (ಸಚಿವ ಸಂಪುಟ) (ಪ್ರಕರಣ ಸಂಖ್ಯೆ: ಸಿ.138/2026)
18. ಸರ್ಕಾರದ ಎಲ್ಲಾ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು.
19. ಕರ್ನಾಟಕ ಸರ್ಕಾರ ಸಚಿವಾಲಯದ ಎಲ್ಲಾ ಶಾಖೆಗಳು.
20. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು

(*ಮುಖ ಪತ್ರದೊಂದಿಗೆ)